ವಿಜಯವಾಣಿ ನಂ.1 ಕನ್ನಡ ದಿನಪತ್ರಿಕೆ

# ಸಿಟಿ ರವಿ ಪ್ರಕರಣ ಸಿಐಡಿಗೆ ಕೊಟ್ಟಿದ್ದಕ್ಕೆ ಹೊರಟ್ಟಿ ಆಕ್ಷೇಪ

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು

ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರನ್ನು ಆಕ್ಷೇಪಾರ್ಹ ಪದಗಳಿಂದ ಬಿಜೆಪಿ ಸದಸ್ಯ ಸಿ.ಟಿ. ರವಿ ನಿಂದಿಸಿದರೆಂಬ ಪ್ರಕರಣವನ್ನು ಸಿಐಡಿ ತನಿಖೆಗೆ ಒಪ್ಪಿಸಿರುವುದಕ್ಕೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

**■ ಗೃಹ ಸಚಿವ ಡಾ. ಜಿ. ಪರಮೇಶ್ವರ್‌ಗೆ ಪತ್ರ**

ಈ ಪ್ರಕರಣದಲ್ಲಿ ಈಗಾಗಲೇ ರೂಲಿಂಗ್ ನೀಡಲಾಗಿದೆ. ಆದರೂ ಸಿಐಡಿ ತನಿಖೆಗೆ ಒಪ್ಪಿಸಿರುವುದು ಏಕೆ ಎಂದು ಆಕ್ಷೇಪಿಸಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರಿಗೆ ಪತ್ರ ಬರೆದಿದ್ದಾರೆ.

ಸಭಾಪತಿ ಹಾಗೂ ಸದನದ ಸಾರ್ವಭೌಮತ್ವವನ್ನು ಬಲಿ ಕೊಡಬಾರದು. ಸಭಾಪತಿ ಅಧಿಕಾರಕ್ಕೆ ಚ್ಯುತಿ ಬರುವಂತೆ ಕಾರ್ಯಾಂಗ ನಡೆದುಕೊಳ್ಳಬಾರದು ಎಂದು ಹೇಳಿದ್ದಾರೆ.

ಪ್ರಕರಣವನ್ನು ಸಿಐಡಿಗೆ ಕೊಟ್ಟಿರುವುದು ತಿಳಿದುಬಂದಿದೆ. ಯಾವ ವಿಷಯವನ್ನು ಸಿಐಡಿಗೆ ಕೊಟ್ಟಿರಬಹುದು ಎಂಬ ಬಗ್ಗೆ ಇನ್ನೂ ಸ್ಪಷ್ಟ ಮಾಹಿತಿ ಇಲ್ಲ. ಸದನದಲ್ಲಿ ನಡೆದಂತಹ ಘಟನೆಯನ್ನು ಚರ್ಚಿಸುವುದು, ಮುಕ್ತಾಯ ಮಾಡುವುದು ಮತ್ತು ಅದರ ಬಗ್ಗೆ ತೀರ್ಮಾನಿಸುವುದರಲ್ಲಿ ಸದನಕ್ಕೆ ಸಾರ್ವಭೌಮತ್ವ ಅಧಿಕಾರವಿರುತ್ತದೆ ಎಂದಿದ್ದಾರೆ ಎಂದು ಸೂಚ್ಯವಾಗಿ ಹೇಳಿದ್ದಾರೆ.

ಪರಿಷತ್‌ನಲ್ಲಿ ನಡೆದ ಘಟನೆಯ ಬಗ್ಗೆ ನಮ್ಮ ನಡವಳಿಗಳು, ರಾಜ್ಯಸಭೆಯ ಕಾರ್ಯವಿಧಾನಗಳನ್ನು ಪರಿಶೀಲನೆ ಮಾಡಿ ತೀರ್ಪು ನೀಡಲಾಗಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ. ಸದನದ ಆವರಣದ ಒಳಗೆ ಶಿಸ್ತು ಸಂರಕ್ಷಿಸುವುದು, ವ್ಯವಹರಣೆಗಳನ್ನು ನಿಯಂತ್ರಿಸುವ ಅಧಿಕಾರ ಸಭಾಪತಿಯವರಿಗೆ ಪ್ರದತ್ತವಾಗಿದ್ದು, ಅವರ ತೀರ್ಪು ಅಂತಿಮವಾಗಿರುತ್ತದೆ. ಶಾಸಕಾಂಗ ಮತ್ತು ಕಾರ್ಯಾಂಗದ ನಡುವೆ ಸಂಘರ್ಷಕ್ಕೆ ಕಾರಣವಾಗಬಾರದು ಎಂದು ಹೇಳಿದ್ದಾರೆ.

Hubli Edition
Jan 12, 2025 Page No. 8
Powered by: erelego.com

ವಿಜಯವಾಣಿ
ನಂ.1 ಕನ್ನಡ ದಿನಪತ್ರಿಕೆ

# ಸಿಐಡಿಗೆ ರವಿ ಪ್ರಕರಣ ಹೊರಟ್ಟಿ ಆಕ್ಷೇಪ

**ಬೆಂಗಳೂರು:** ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ವಿರುದ್ಧ ಆಕ್ಷೇಪಾರ್ಹ ಪದಗಳನ್ನು ಬಳಸಿ ಬಿಜೆಪಿ ಸದಸ್ಯ ಸಿ.ಟಿ. ರವಿ ನಿಂದಿಸಿದರೆಂಬ ಪ್ರಕರಣವನ್ನು ಸಿಐಡಿ ತನಿಖೆಗೆ ಒಪ್ಪಿಸಿರುವುದಕ್ಕೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಈ ಪ್ರಕರಣದಲ್ಲಿ ಈಗಾಗಲೆ ರೂಲಿಂಗ್ ನೀಡಲಾಗಿದೆ. ಆದರೂ ಸಿಐಡಿ ತನಿಖೆಗೆ ಒಪ್ಪಿಸಿರುವುದು ಏಕೆ ಎಂದು ಆಕ್ಷೇಪಿಸಿ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರಿಗೆ ಪತ್ರ ಬರೆದಿದ್ದಾರೆ.



■ ಗೃಹ ಸಚಿವ ಪರಮೇಶ್ವರ್‌ಗೆ ಪತ್ರ

ಸಭಾಪತಿ ಹಾಗೂ ಸದನದ ಸಾರ್ವಭೌಮತ್ವವನ್ನು ಬಲಿ ಕೊಡಬಾರದು. ಸಭಾಪತಿ ಅಧಿಕಾರಕ್ಕೆ ಚ್ಯುತಿ ಬರುವಂತೆ ಕಾರ್ಯಾಂಗ ನಡೆದುಕೊಳ್ಳಬಾರದು ಎಂದು ಹೇಳಿದ್ದಾರೆ.

ಪ್ರಕರಣವನ್ನು ಸಿಐಡಿಗೆ ಕೊಟ್ಟಿರುವುದು ತಿಳಿದುಬಂದಿದೆ. ಯಾವ ವಿಷಯವನ್ನು ಸಿಐಡಿಗೆ ಕೊಟ್ಟಿರಬಹುದು ಎಂಬ ಬಗ್ಗೆ ಇನ್ನೂ ಸ್ಪಷ್ಟ ಮಾಹಿತಿ ಇಲ್ಲ. ಸದನದಲ್ಲಿ ನಡೆದಂತಹ ಘಟನೆಯನ್ನು ಚರ್ಚಿಸುವುದು, ಮುಕ್ತಾಯ ಮಾಡುವುದು ಮತ್ತು ಅದರ ಬಗ್ಗೆ ತೀರ್ಮಾನಿಸುವುದರಲ್ಲಿ ಸದನಕ್ಕೆ ಸಾರ್ವಭೌಮತ್ವ ಅಧಿಕಾರವಿರುತ್ತದೆ ಎಂದು ಸೂಚ್ಯವಾಗಿ ಹೇಳಿದ್ದಾರೆ.

ಪರಿಷತ್‌ನಲ್ಲಿ ನಡೆದ ಘಟನೆ ಬಗ್ಗೆ ನಮ್ಮ ನಡಾವಳಿಗಳು, ರಾಜ್ಯಸಭೆಯ ಕಾರ್ಯವಿಧಾನಗಳನ್ನು ಪರಿಶೀಲನೆ ಮಾಡಿ ತೀರ್ಪು ನೀಡಲಾಗಿದೆ ಎಂದು ಪತ್ರದಲ್ಲಿ ಹೊರಟ್ಟಿ ತಿಳಿಸಿದ್ದಾರೆ. ಸದನದ ಆವರಣದ ಒಳಗೆ ಶಿಸ್ತು ಸಂರಕ್ಷಿಸುವುದು, ವ್ಯವಹರಣೆಗಳನ್ನು ನಿಯಂತ್ರಿಸುವ ಅಧಿಕಾರ ಸಭಾಪತಿಯವರಿಗೆ ಪ್ರದತ್ತವಾಗಿದ್ದು, ಅವರ ತೀರ್ಪು ಅಂತಿಮವಾಗಿರುತ್ತದೆ. ಶಾಸಕಾಂಗ ಮತ್ತು ಕಾರ್ಯಾಂಗದ ನಡುವೆ ಸಂಘರ್ಷಕ್ಕೆ ಕಾರಣವಾಗಬಾರದು ಎಂದು ಹೇಳಿದ್ದಾರೆ.

Bengaluru Edition
Jan 12, 2025 Page No. 4
Powered by: erelego.com